ಗತವರ್ಷದ ಮೃತಪಾಪವ ಸುಡು, ತೊರೆ;
ಅಪಜಯ ಅವಮಾನಗಳನು ಬಿಡು; ಮರೆ;
ಕಳಚಲಿ ಬೀಳಲಿ ಬಾಳಿನ ಹಳೆಪೊರೆ,
ನವ ಸಂವತ್ಸರವನು ಕೂಗಿ ಕರೆ!

ಹೊಸ ಮರದಲಿ ಹೂ ತುಂಬಿದೆ ನೋಡು!
ಆಲಿಸು! ಜೇನಿನ ಹಬ್ಬದ ಹಾಡು!
ಜೀವನವೆಂಬುದು ಹೂವಿನ ಬೀಡು;
ಕವಿಯೆದೆ ಹೆಜ್ಜೇನಿನ ಗೂಡು!

**-ಕುವೆಂಪು**

ಹೊಸತು ವರುಷ, ಹೊಸತು ಹರುಷ
ಹೊಸತು ಬಯಕೆ ನಮ್ಮವು
ತಳಿರ ತುಂಬಿದಾಸೆಯೆಲ್ಲ,
ಹರಕೆಯೆಲ್ಲ ನಮ್ಮವು.

ಹೆಜ್ಜೆಗೊಂದು ಹೊಸ ಯುಗಾದಿ
ಚೆಲುವು ನಮ್ಮ ಜೀವನ!
ನಮ್ಮ ಹಾದಿಯೋ ಅನಾದಿ,
ಪಯಣವೆಲ್ಲ ಪಾವನ.

**-ಕೆ.ಎಸ್. ನರಸಿಂಹಸ್ವಾಮಿ**



ಚಿತ್ರ: ತಾಜುದ್ದೀನ್ ಆಜಾದ್



ಚಿತ್ರ: ಸವಿತಾ ಬಿ.ಆರ್.

ಬಂದ ಚೈತ್ರದ ಹಾದಿ ತೆರೆದಿದೆ
ಬಣ್ಣ–ಬೆಡಗಿನ ಮೋಡಿಗೆ
ಹೊಸತು ವರ್ಷದ ಹೊಸತು ಹರ್ಷದ
ಬೇವು–ಬೆಲ್ಲದ ಬೀಡಿಗೆ.

ಕೊಂಬೆ ಕೊಂಬೆಯ ತುಂಬ ಪುಟಿದಿದೆ
ಅಂತರಂಗದ ನಂಬಿಕೆ
ಚಿಗುರು ಹೂವಿನ ಬಣ್ಣದಾರತಿ
ಯಾವುದೋ ಆನಂದಕೆ!

ಯುಗ ಯುಗಾದಿಗೆ ಹೊಸತು ಹರ್ಷವು
ಬರಲಿ, ಬಾರದೆ ಹೋಗಲಿ;
ಬಂದ ಚೈತ್ರ ಚಿಗುರಿನಂದದ
ಮಂದಹಾಸವೆ ಉಳಿಯಲಿ.

**-ಜಿ.ಎಸ್. ಶಿವರುದ್ರಪ್ಪ**

ಯುಗಯುಗಾದಿಯ ತೆರೆಗಳೇಳುತಿವೆ, ಬೀಳುತಿವೆ
ಹೊಸಹೊಸವು ಪ್ರತಿ ವರುಷವು;
ಒಳಗೆ ಅದೋ ಕಾಣುತಿದೆ ಚೆಲುವಿರದ ನಲವಿರದ
ಕೊಳೆಯ ಬೆಳೆ; ರಂಗಮಂದಿರವು!

ಈ ಯುಗಾದಿಯ ಮಾತು ಕೇಳುತಿದೆ ಮರಮರಳಿ
ಮೊದಲಾಗುತ್ತಿದೆ ಯುಗವು, ನರನ ಜಗವು;
ವರುಷವರುಷವು ನಮ್ಮ ಪಯಣ ಮೊದಲಾಗುತ್ತಿದೆ;
ಇದಕು ಮಿಗಿಲಿಲ್ಲ, ಹಾ, ನರಗೆ ಸೊಗವು!

**-ಎಂ. ಗೋಪಾಲಕೃಷ್ಣ ಅಡಿಗ**

ಪ್ರತಿ ಯುಗಾದಿ ವಿಜಯದೊಸಗೆ
ಸತ್ವ ರಜೋಗುಣದ ಬೆಸುಗೆ
ಅಸುರ ವಧೆಯ ವೀರಗಾಥೆ
ಕನ್ನಡಿಗರ ಗೆಲವ ಗೀತೆ.

ಎರಡು ದಿನದ ಹಬ್ಬದಂದು
ಬೆಳಕಿನಲ್ಲಿ ಬಾಳು ಮಿಂದು
ಮೊದಲ ಚಂದ್ರ ವೀಕ್ಷಣೆ
ಜನಕೆ ತರಲಿ ರಕ್ಷಣೆ.

**-ಕೆ.ಎಸ್. ನಿಸಾರ್ ಅಹಮದ್**